# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **829** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಡಿ.ಎಸ್ ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆಯಿಂದಾಗಿ ಸಾರ್ವಜನಿಕರಿಗೆ ಪ್ರತಿ ತಿಂಗಳ ಪಡಿತರ ಸಾಮಾಗ್ರಿಗಳ ಸಮಯಕ್ಕೆ ಸರಿಯಾಗಿ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ | ಬಂದಿದ್ದಲ್ಲಿ ಈ ಸಮಸ್ಯೆಯ ಬಗ್ಗೆ ನಿರ್ಲಕ್ಷವನ್ನು ವಹಿಸಲು ಕಾರಣಗಳೇನು; | ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್‌ಗಳು ಬಹಳ ಹಳೆಯದಾಗಿದ್ದು, ಸದರಿ ಸರ್ವರ್‌ಗಳ ಸಾಮರ್ಥ್ಯವನ್ನು ಹೆಚ್ಚಿಸಲು ಸಾಧ್ಯವಾಗಿರುವುದಿಲ್ಲ. ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre)ಗೆ ಆಹಾರ ತಂತ್ರಾಂಶದ Migration ಕಾರ್ಯವು ಪ್ರಗತಿಯಲ್ಲಿದ್ದು, ಸದರಿ ಕಾರ್ಯವು ಅಂತಿಮ ಹಂತದಲ್ಲಿರುತ್ತದೆ. |
| ಇ | ಸರ್ವರ್ ಸಮಸ್ಯೆಯನ್ನು ಹೋಗಲಾಡಿಸಿ ಬಡ ಜನರಿಗೆ ಪ್ರತಿ ತಿಂಗಳು ನಿಯಮಿತವಾಗಿ ಪಡಿತರವನ್ನು ವಿತರಿಸಲು ಕೈಗೊಳ್ಳಬಹುದಾದ ಕ್ರಮಗಳೇನು; | ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಸರ್ವರ್‌ಗಳಿಂದ ಅಕ್ಟೋಬರ್-2024ರ ಮಾಹೆಯಿಂದ ಆಹಾರ ಧಾನ್ಯ ಹಂಚಿಕೆ ಪ್ರಾರಂಭವಾಗಿರುತ್ತದೆ. ಇದರಿಂದಾಗಿ ಪಡಿತರವನ್ನು ಪಡಿತರ ಚೀಟಿದಾರರಿಗೆ ಅವರ ಬಯೋಮೇಟ್ರಿಕ್ ಪಡೆದು ಆಹಾರಧಾನ್ಯವನ್ನು ಯಾವುದೇ ಸಮಸ್ಯೆ ಇಲ್ಲದೆ ವಿತರಿಸಲು ಕ್ರಮವಹಿಸಲಾಗಿರುತ್ತದೆ. |

**ಆನಾಸ 394 ಡಿಆರ್‌ಎ 2024 (ಇ-ಆಫೀಸ್)**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು